831

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಲಾನಯನ ಅಭಿವೃದ್ದಿ ಇಲಾಖೆಯ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಯನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಗೆ ಉನ್ನತೀಕರಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಕೃಇ 27 ಕೃಯೋಕಾ 2013, ದಿನಾಂಕ: 05.04.2013.
2. ಸರ್ಕಾರದ ಅಧಿಸೂಚನೆ ಸಂ:ಸಿಆಸುಇ 216 ಎಸ್‌ಎಫ್‌ಪಿ 2012 ದಿನಾಂಕ: 29.06.2013.
3. ಸಿಆಸುಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ. :ಸಿಆಸುಇ 216 ಎಸ್‌ಎಫ್‌ಪಿ 2012(p), ದಿನಾಂಕ: 26.08.2013.

*********

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಜಲಾನಯನ ಅಭಿವೃದ್ದಿ ಇಲಾಖೆಯ, ಕೇಂದ್ರ ಕಚೇರಿಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ವೃಂದದ ಎರಡು ಹುದ್ದೆಗಳನ್ನು ಮಾತ್ರ 2013–14 ನೇ ಸಾಲಿನಲ್ಲಿ ಮುಂದುವರೆಸುವ ಬಗ್ಗೆ ಆದೇಶ ಹೊರಡಿಸಲಾಗಿದೆ. ಮೇಲೆ (2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ ಶ್ರೀ.ಜಿ ಸತೀಶ್, ಭಾ.ಅ.ಸೇ. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಿ ಜಲಾನಯನ ಅಭಿವೃದ್ದಿ ಇಲಾಖೆಯಲ್ಲಿಯೇ ಮುಂದುವರಿಸಲಾಗಿದೆ. ಜಲಾನಯನ ಅಭಿವೃದ್ದಿ ಇಲಾಖೆಯಲ್ಲಿ ಮಂಜೂರಾದ ಹುದ್ದೆಯು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ವೃಂದದ ಹುದ್ದೆಯಾಗಿದ್ದು, ಸದರಿ ಅಧಿಕಾರಿಯವರನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಿರುವುದರಿಂದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಉನ್ನತೀಕರಿಸಿ ಆದೇಶ ಹೊರಡಿಸುವಂತೆ ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯವರು ಕೋರಿರುತ್ತಾರೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯವರು ಸಲ್ಲಿಸಿದ್ದ ಕೋರಿಕೆಯನ್ನು ಪರಿಶೀಲಿಸಿ, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಸದರಿ ಹುದ್ದೆಯಲ್ಲಿ ಇರುವವರೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಉನ್ನತೀಕರಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 55 ಕೃಪಸೇ 2013 ಬೆಂಗಳೂರು, ದಿನಾಂಕ: 25/10/2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಪ್ರಸ್ತುತ ಜಲಾನಯನ ಅಭಿವೃದ್ಧಿ ಇಲಾಖೆ, ಕೇಂದ್ರ ಕಚೇರಿ, ಬೆಂಗಳೂರು, ಇಲ್ಲಿ ಇರುವ ಮುಖ್ಯ ಅರಣ್ಯ

ಸಂರಕ್ಷಣಾಧಿಕಾರಿ ಹುದ್ದೆಯನ್ನು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ. ಜಿ.ಸತೀಶ್, ಭಾ.ಅ.ಸೇ. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಇವರು ದಿನಾಂಕ;01/07/2013ರಿಂದ, ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸುವವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಉನ್ನತೀಕರಿಸಿ ಆದೇಶಿಸಿದೆ.

ಈ ಅದೇಶವನ್ನು ಸಿಆಸುಇ 216 ಎಸ್ಎಫ್‌ಪಿ 2012(P), ದಿನಾಂಕ: 26.08.2013ರ ಅನಧಿಕೃತ ಟಿಪ್ಪಣಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1) ಅಕೌಂಟ್ಸ್ ಆಫೀಸರ್, ಜಿಇ-5, ಮಹಾಲೇಖಪಾಲರ ಕಛೇರಿ, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ,
4) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6) ಸಂಬಂಧಿಸಿದ ಅಧಿಕಾರಿಗಳು (ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಮೂಲಕ).
7) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆ, ಸುಧಾರಣಾ ಇಲಾಖೆ.(ಸೇವೆಗಳು-5)
8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
9) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.